ಸಂಖ್ಯೆ:ಸರ್ಕಾಅ/ವ್ಯ/175/2020.                                                    ದಿನಾಂಕ: 09-01-2020

**ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಭರ್ತಿ ಮಾಡುವ ಬಗ್ಗೆ ದಿನಾಂಕ 09-01-2020 ರಂದು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ನಡೆದ ಸಭೆಯ ನಡವಳಿ.**

ಉಪಸ್ಥಿತರು:

1. ಸಿಂಧೂ. ಬಿ. ರೂಪೇಶ್. ಐ.ಎ.ಎಸ್
   ಜಿಲ್ಲಾಧಿಕಾರಿಗಳು.
   ದಕ್ಷಿಣ ಕನ್ನಡ ಜಿಲ್ಲೆ.
   ಮಂಗಳೂರು.
2. ಬಿ.ಎಂ ಲಕ್ಷ್ಮೀ ಪ್ರಸಾದ್. ಭಾ.ಪೊ.ಸೇ.
   ಪೊಲೀಸ್ ಅಧೀಕ್ಷಕರು.
   ದಕ್ಷಿಣ ಕನ್ನಡ ಜಿಲ್ಲೆ. ಮಂಗಳೂರು.
3. ಬಿ. ಶೇಖರ್ ಶೆಟ್ಟಿ.
   ಸರಕಾರಿ ಅಭಿಯೋಜಕರು.
   ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ. ಮಂಗಳೂರು.

* * * * *

ಸರ್ಕಾರದ ಆದೇಶ ಸಂಖ್ಯೆ:ಒಇ 218 ಪಿಪಿಇ 2019(ಭಾಗ-2) ಬೆಂಗಳೂರು. ದಿನಾಂಕ 07 ನೇ ಜನವರಿ 2020 ರಲ್ಲಿ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ 205 ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರುಗಳ ಹುದ್ದೆಗಳನ್ನು ನೇರ ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆಯು ವಿಳಂಬವಾಗುವುದರಿಂದ. ದೈನಂದಿನ ಕೆಲಸ ಕಾರ್ಯ ನಿರ್ವಹಿಸಲು ಈ ಹುದ್ದೆಗಳನ್ನು ನೇರ ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೆ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಭರ್ತಿ ಮಾಡಿಕೊಳ್ಳಲು ಸರ್ಕಾರ ಮಂಜೂರಾತಿ ನೀಡಿರುವುದಾಗಿದೆ

ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಸಹಾಯಕ ಸರ್ಕಾರಿ ಅಭಿಯೋಜಕರನ್ನು ನೇಮಕ ಮಾಡಿಕೊಳ್ಳಲು ಈ ಕೆಳಕಂಡಂತೆ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

| | |
|---|---|
| 1. ಜಿಲ್ಲಾಧಿಕಾರಿ | : ಅಧ್ಯಕ್ಷರು |
| 2. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ | : ಸದಸ್ಯರು |
| 3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳ ಸರ್ಕಾರಿ ಅಭಿಯೋಜಕರು | : ಸದಸ್ಯ ಕಾರ್ಯದರ್ಶಿ |

ಸದರಿ ಸರಕಾರಿ ಆದೇಶದಲ್ಲಿ ಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸಲು ನೀಡಿರುವ ಷರತ್ತು ಮತ್ತು ನಿಬಂಧನೆ ಹಾಗೂ ನೇಮಕಾತಿ ವಿಧಾನಗಳ ಬಗ್ಗೆ ಚರ್ಚಿಸಿ ತಿಳಿದುಕೊಳ್ಳಲಾಯಿತು.

ಸಭೆಯಲ್ಲಿ ನೇಮಕಾತಿ ಕುರಿತು ಈ ಕೆಳಕಂಡ ಪ್ರಮುಖ ವಿಷಯಗಳನ್ನು ಚರ್ಚಿಸಿ ಅಂತಿಮ ತೀರ್ಮಾನ ಕೈಗೊಳ್ಳಲಾಯಿತು.

- ಸರಕಾರಿ ಆದೇಶ/ನಿಯಮಾವಳಿಯಂತೆ ನೇಮಕಾತಿ ಕೈಗೊಳ್ಳುವಂತೆ ಚರ್ಚಿಸಲಾಯಿತು.
- ಆಯ್ಕೆಗೊಂಡ ಅಭ್ಯರ್ಥಿಗಳ ಹೆಸರುಗಳ ಪಟ್ಟಿಯನ್ನು ಜಿಲ್ಲಾ ಸಮಿತಿಯು ಜಿಲ್ಲಾ ಪ್ರಧಾನ ನ್ಯಾಯಾಧೀಶರ ಅನುಮೋದನೆಯೊಂದಿಗೆ ದಿನಾಂಕ 31-01-2020 ರೊಳಗೆ ಅಭಿಯೋಜನಾ ನಿರ್ದೇಶಕರಿಗೆ ಸಲ್ಲಿಸಬೇಕಾಗಿರುವುದರಿಂದ, ಶೀಘ್ರ ಸದರಿ ಹುದ್ದೆಗಳ ಆಯ್ಕೆಯ ಕುರಿತು ಪ್ರಕಟನೆ ಹೊರಡಿಸುವ ಬಗ್ಗೆ ಚರ್ಚಿಸಲಾಯಿತು. ಅರ್ಜಿಯ ನಿಗದಿತ ನಮೂನೆಯನ್ನು (ಅನುಬಂಧ-1) ಪರಿಶೀಲಿಸಲಾಯಿತು.
- ಸರಕಾರದ ಆದೇಶದಂತೆ ಅಭ್ಯರ್ಥಿಗಳು ಸದರಿ ಅರ್ಜಿಯನ್ನು ಭರ್ತಿ ಮಾಡಿ ಸದಸ್ಯ ಕಾರ್ಯದರ್ಶಿ/ಸಹಾಯಕ ಸರ್ಕಾರಿ ಅಭಿಯೋಜಕರು ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಮತ್ತು ಸರ್ಕಾರಿ ಅಭಿಯೋಜಕರು, ಅಭಿಯೋಜಕರ ಕಛೇರಿ, ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣ, ಕೋಡಿಯಾಲ್ ಬೈಲ್, ಮಂಗಳೂರು ಇವರಿಗೆ ದಿನಾಂಕ 21-01-2020 ರೊಳಗೆ ಸಲ್ಲಿಸುವ ಬಗ್ಗೆ ತೀರ್ಮಾನ ಕೈಗೊಳ್ಳಲಾಯಿತು.
- ಸದರಿ ನೇಮಕಾತಿಗೆ ವ್ಯಾಪಕ ಪ್ರಚಾರ ನೀಡುವ ನಿಟ್ಟಿನಲ್ಲಿ ನೇಮಕಾತಿ ಪ್ರಕಟನೆಯನ್ನು ನಿಯಮಾನುಸಾರ ಸ್ಥಳೀಯ ಪತ್ರಿಕೆ ಹಾಗೂ ದೈನಂದಿನ ಪತ್ರಿಕೆಗಳಲ್ಲಿ ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿ ಮುಖಾಂತರ ಪ್ರಕಟಿಸುವ ಬಗ್ಗೆ ತೀರ್ಮಾನಿಸಲಾಯಿತು. ಅಲ್ಲದೇ ಸಾಮಾಜಿಕ ಜಾಲತಾಣಗಳಲ್ಲಿಯೂ ಹೆಚ್ಚಿನ ಪ್ರಚಾರ ನೀಡುವ ಬಗ್ಗೆ ತೀರ್ಮಾನಿಸಲಾಯಿತು. ಜೊತೆಗೆ ನ್ಯಾಯಾಲಯಗಳ ನೋಟೀಸ್ ಬೋರ್ಡ್‌ಗಳಲ್ಲಿ, ವಕೀಲರ ಸಂಘದ ನೋಟೀಸ್ ಬೋರ್ಡ್‌ಗಳಲ್ಲಿ ಹಾಗೂ ಜಿಲ್ಲಾಡಳಿತದ ವೆಬ್ ಸೈಟ್‌ಗಳಲ್ಲಿ ಪ್ರಕಟಿಸಿ ಪ್ರಚಾರ ನೀಡುವ ಬಗ್ಗೆ ತೀರ್ಮಾನಿಸಲಾಯಿತು.
- ಅಭ್ಯರ್ಥಿಗಳಿಗೆ ಅರ್ಜಿಯು ಸುಲಭವಾಗಿ ಸಿಗುವ ನಿಟ್ಟಿನಲ್ಲಿ ಅರ್ಜಿಗಳನ್ನು ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ವಕೀಲರ ಸಂಘದಲ್ಲಿ ಹಾಗೂ ಸದಸ್ಯ ಕಾರ್ಯದರ್ಶಿ/ಸರಕಾರಿ ಅಭಿಯೋಜಕರು, ಮಂಗಳೂರು ರವರ ಕಛೇರಿಯಲ್ಲಿ ದೊರಕುವಂತೆ ವ್ಯವಸ್ಥೆ ಕಲ್ಪಿಸುವ ಬಗ್ಗೆ ತೀರ್ಮಾನಿಸಲಾಯಿತು.
- ಸರ್ಕಾರಿ ಅಭಿಯೋಜಕರು/ಸದಸ್ಯ ಕಾರ್ಯದರ್ಶಿ ರವರು ಸದರಿ ಅರ್ಜಿಗಳನ್ನು ಸ್ವೀಕರಿಸಿ, ಒಂದು ರಿಜಿಸ್ಟರ್‌ನ್ನು ತೆರೆದು ಸ್ವೀಕರಿಸಿದ ಅರ್ಜಿಗಳನ್ನು ಸರಿಯಾಗಿ/ಸ್ಪಷ್ಟವಾಗಿ ನಮೂದಿಸಿಕೊಳ್ಳುವುದು. ಅಂತಿಮವಾಗಿ ದಿನಾಂಕ 21-01-2020 ರವರೆಗೆ ಸ್ವೀಕರಿಸಿದ ಅರ್ಜಿಗಳನ್ನು ರಿಜಿಸ್ಟರ್‌ನಲ್ಲಿ ನಮೂದಿಸಿ, ಸ್ವೀಕರಿಸಿದ ಒಟ್ಟು ಅರ್ಜಿಗಳನ್ನು ನಮೂದಿಸಿ, ನಿಯಮಾನುಸಾರ ಅರ್ಜಿಯೊಂದಿಗೆ ಆಯ್ಕೆ ಸಮಿತಿಯ ಮುಂದೆ ಮಂಡಿಸುವಂತೆ ತೀರ್ಮಾನಿಸಲಾಯಿತು.

❖ ಆಯ್ಕೆ ಸಮಿತಿಯು ಮುಂದಿನ ಸಭೆಯ ತಾತ್ಕಾಲಿಕ ದಿನಾಂಕವನ್ನು 22-01-2020 ಎಂದು ನಿರ್ಧರಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಬಿ.ಎಂ ಲಕ್ಷ್ಮೀ ಪ್ರಸಾದ್, ಭಾ.ಪೊ.ಸೇ.)
ಪೋಲೀಸ್ ಅಧೀಕ್ಷಕರು,
ದಕ್ಷಿಣ ಕನ್ನಡ ಜಿಲ್ಲೆ,ಮಂಗಳೂರು.
ಹಾಗೂ ಸದಸ್ಯರು
ಸಹಾಯಕ ಸರ್ಕಾರಿ ಅಭಿಯೋಜಕರುಗಳ
ನೇಮಕಾತಿ ಪ್ರಾಧಿಕಾರ.

(ಸಿಂಧೂ. ಬಿ. ರೂಪೇಶ್, ಐ.ಎ.ಎಸ್)
ಜಿಲ್ಲಾಧಿಕಾರಿಗಳು,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
ಹಾಗೂ ಅಧ್ಯಕ್ಷರು ಸಹಾಯಕ ಸರ್ಕಾರಿ
ಅಭಿಯೋಜಕರುಗಳ ನೇಮಕಾತಿ ಪ್ರಾಧಿಕಾರ.

(ಬಿ. ಶೇಖರ್ ಶೆಟ್ಟಿ)
ಸರಕಾರಿ ಅಭಿಯೋಜಕರು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಮಂಗಳೂರು ಹಾಗೂ
ಸದಸ್ಯ ಕಾರ್ಯದರ್ಶಿ ಸಹಾಯಕ ಸರ್ಕಾರಿ ಅಭಿಯೋಜಕರುಗಳ
ನೇಮಕಾತಿ ಪ್ರಾಧಿಕಾರ.

| |
|---|
| ಸಹಿ ಮಾಡಿರುವ ಅಭ್ಯರ್ಥಿ ಫೋಟೋ |

**ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗೆ ಗುತ್ತಿಗೆ ಆಧಾರದಲ್ಲಿ ನೇಮಕಾತಿಗಾಗಿ ಅರ್ಜಿ**

| | | |
|---|---|---|
| 1. | ಅರ್ಜಿದಾರರ ಹೆಸರು, ತಂದೆಯ ಹೆಸರು ಮತ್ತು ವಿಳಾಸ | : |
| 2. | ಲಿಂಗ | : |
| 3. | ಜನ್ಮ ದಿನಾಂಕ (ಎಸ್ಎಸ್ಎಲ್‌ಸಿ / ತತ್ಸಮಾನ ಅಂಕ ಪಟ್ಟಿಯಲ್ಲಿರುವಂತೆ) | : |
| 4. | ವಿದ್ಯಾರ್ಹತೆ | : |
| 5. | ಎಲ್.ಎಲ್.ಬಿ ಪದವಿಯಲ್ಲಿ ವರ್ಷಾವಾರು/ ಸೆಮಿಸ್ಟರ್‌ವಾರು ಪಡೆದ ಅಂಕ ಮತ್ತು ಪ್ರತಿ ವರ್ಷ/ಸೆಮಿಸ್ಟಾರ್ ಶೇಕಡಾವಾರು ಅಂಕ | : |
| 6. | ವಕೀಲರಾಗಿ ನೋಂದಣಿ ಮಾಡಿದ ನೊಂದಣಿ ಸಂಖ್ಯೆ ಮತ್ತು ದಿನಾಂಕ | : |
| 7. | ವಕೀಲ ವೃತ್ತಿ ನಡೆಸುತ್ತಿರುವ ಸ್ಥಳ | : |
| 8. | ವಕೀಲ ವೃತ್ತ ನಡೆಸಿದ ಅನುಭವದ ಕುರಿತು ಸಂಕ್ಷಿಪ್ತ ವಿವರಗಳು. | : |
| 9. | ವಕೀಲ ವೃತ್ತಿ ಆರಂಭಿಸಿದ ದಿನಾಂಕ ಮತ್ತು ದಿನಾಂಕ 21-01-2020ಕ್ಕೆ ವಕೀಲರ ವೃತ್ತಿ ನಡೆಸಿದ ಒಟ್ಟು ಅವಧಿ. | : |
| 10. | ಅರ್ಜಿದಾರರು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ್ದೀರಾ? ಹೌದದಲ್ಲಿ ಮಾಹಿತಿ. | : |
| 11. | ಮೀಸಲಾತಿ ಪ್ರವರ್ಗ 1-2-3-ಸೇರಿದವರಾಗಿದ್ದಲ್ಲಿ ಯಾವ ಪ್ರವರ್ಗಕ್ಕೆ ಸೇರಿದವರು ಎಂಬ ಬಗ್ಗೆ ಮಾಹಿತಿ. | : |
| 12. | ಅರ್ಜಿದಾರರ ವಿರುದ್ಧ ಯಾವುದಾದರೂ ಕ್ರಿಮಿನಲ್ ಪ್ರಕರಣ ದಾಖಲಾಗಿದೆಯೇ? ಇದ್ದಲ್ಲಿ ಆ ಬಗ್ಗೆ ಮಾಹಿತಿ ನೀಡುವುದು. | : |
| 13. | ಅರ್ಜಿದಾರರು ಗಣಕ ಯಂತ್ರದ ಪರಿಣಿತಿ/ಜ್ಞಾನವುಳ್ಳವರೇ? ಹೌದದಲ್ಲಿ ಈ ಬಗ್ಗೆ ಸಂಕ್ಷಿಪ್ತ ಮಾಹಿತಿ. | : |
| 14. | ಯಾವುದೇ ಸರ್ಕಾರಿ/ಅರೆ ಸರ್ಕಾರಿ ಸೇವೆಯಿಂದ ವಜಾಗೊಂಡಿರುವರೇ? | : |
| 15. | ಗುತ್ತಿಗೆ ಆಧಾರದಲ್ಲಿ ಆಯ್ಕೆಯಾದಲ್ಲಿ ಜಿಲ್ಲೆಯ ಇತರೆ ತಾಲ್ಲೂಕು ಅಥವಾ ಪಕ್ಕದ ಜಿಲ್ಲೆಯಲ್ಲಿ ಸೇವೆ ಸಲ್ಲಿಸಲು ಸಿದ್ದರಿರುವಿರೋ? | : |

ಸ್ಥಳ :
ದಿನಾಂಕ:

ಅರ್ಜಿದಾರರ ಸಹಿ

**ಅರ್ಜಿಯ ಜೊತೆ ಸ್ವಯಂ ದೃಢೀಕರಿಸಿ ಲಗತ್ತಿಸಬೇಕಾದ ದಾಖಲೆಗಳು**

1. ಎಸ್.ಎಸ್.ಎಲ್.ಸಿ/ತತ್ಸಮಾನ ಅಂಕ ಪಟ್ಟಿ ಪ್ರತಿ.

2. ಎಲ್.ಎಲ್.ಬಿ ಪದವಿಯ ಪ್ರತೀ ವರ್ಷದ / ಸೆಮಿಸ್ಟರ್‌ನ ಅಂಕ ಪಟ್ಟಿಗಳ ಪ್ರತಿಗಳು.

3. ವಕೀಲರಾಗಿ ನೊಂದಣಿ ಆದ ಬಾರ್ ಕೌನ್ಸಿಲ್ ನೀಡಿದ ಸನ್ನದಿನ ಪ್ರತಿ.

4. ವಕೀಲರಾಗಿ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ವಕೀಲರ ಸಂಘದಿಂದ ಪಡೆದ ಪ್ರಮಾಣ ಪತ್ರದ ಪ್ರತಿ.

5. ವಕೀಲರಾಗಿ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ನ್ಯಾಯಾಲಯದ ಪೀಠಾಸೀನ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರದ ಪ್ರತಿ.

6. ಗುತ್ತಿಗೆ ಆಧಾರದಲ್ಲಿ ಆಯ್ಕೆಯಾದಲ್ಲಿ ಜಿಲ್ಲೆಯ ಇತರೆ ತಾಲ್ಲೂಕುಗಳಲ್ಲಿ ಅಥವಾ ಪಕ್ಕದ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸಲು ಸಿದ್ದರಿರುವುದಾಗಿ ನೀಡಿದ ಒಪ್ಪಿಗೆ ಪತ್ರ.

7. ಮೀಸಲಾತಿಗೆ ಸಂಬಂಧಿಸಿದ ಜಾತಿ / ಪ್ರವರ್ಗಕ್ಕೆ ಸೇರಿದ ಬಗ್ಗೆ ಸಂಬಂಧಪಟ್ಟ ಪ್ರಾಧಿಕಾರವು ನೀಡಿದ ಜಾತಿ / ಆದಾಯ ಪ್ರಮಾಣ ಪತ್ರದ ಪ್ರತಿ.

**[ಟಿಪ್ಪಣಿ: 1. ಅರ್ಜಿಯನ್ನು ಸದಸ್ಯ ಕಾರ್ಯದರ್ಶಿ, ಸಹಾಯಕ ಸರ್ಕಾರಿ ಅಭಿಯೋಜಕರ ಜಿಲ್ಲಾಮಟ್ಟದ ಆಯ್ಕೆ ಸಮಿತಿ ಮತ್ತು ಸರ್ಕಾರಿ ಅಭಿಯೋಜಕರು, ಅಭಿಯೋಜಕರ ಕಛೇರಿ, ಜಿಲ್ಲಾ ನ್ಯಾಯಾಲಯದ ಸಂಕೀರ್ಣ, ಕೊಡಿಯಾಲ್‌ಬೈಲ್, ಮಂಗಳೂರು ಇವರಿಗೆ ದಿನಾಂಕ 21-1-2020ರೊಳಗೆ ಸಲ್ಲಿಸುವುದು.**

**2. ದಿನಾಂಕ 21-1-2020ಕ್ಕೆ ಸಾಮಾನ್ಯ ಪ್ರವರ್ಗರವರು-37 ವರ್ಷ,ಪ.ಜಾ. ಮತ್ತು ಪ.ಪಂಗಡದವರು ಮತ್ತು ಪ್ರವರ್ಗ I ರವರು 42 ವರ್ಷ, ಹಾಗೂ ಪ್ರವರ್ಗ-IIA, IIB, IIIA ಮತ್ತು IIIB ರವರು- 40 ವರ್ಷ ಮೀರಿರಬಾರದು.]**

# ಘೋಷಣೆ

ನಾನು ಗುತ್ತಿಗೆ ಆಧಾರದ ನೇಮಕಾತಿಗೆ ಸಂಬಂಧಪಟ್ಟ ಮಾಹಿತಿಗಳನ್ನು ತಿಳಿದಿರುತ್ತೇನೆ ಮತ್ತು ಈ ಅರ್ಜಿಯಲ್ಲಿ ನಾನು ಒದಗಿಸಿರುವ ಮಾಹಿತಿಯು ನನ್ನ ತಿಳುವಳಿಕೆಗೆ ಅನುಸಾರ ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಎಂದು ಪ್ರಮಾಣೀಕರಿಸಿ ಘೋಷಿಸಿರುತ್ತೇನೆ. ಈ ಅರ್ಜಿಯಲ್ಲಿ ಒದಗಿಸಿರುವ ವಿವರಗಳು ಸುಳ್ಳು ಅಥವಾ ತಪ್ಪೆಂದು ಕಂಡು ಬಂದಲ್ಲಿ ಗುತ್ತಿಗೆ ಆಧಾರದ ನೇಮಕಾತಿಗೆ ನಾನು ಅನರ್ಹಗೊಳ್ಳುವುದರ ಜೊತೆಗೆ ನಾನು ಸೂಕ್ತ ಕಾನೂನು ಕ್ರಮಕ್ಕೆ ಒಳಪಡುವೆನೆಂದು ಒಪ್ಪಿರುತ್ತೇನೆ.

ಅರ್ಜಿದಾರರ ಸಹಿ

ದಿನಾಂಕ:

ಸ್ಥಳ

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಭರ್ತಿ ಮಾಡುವ ಬಗ್ಗೆ.

ಓದಲಾಗಿದೆ: 1) ನಿರ್ದೇಶಕರ ಪರವಾಗಿ, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರ ಪತ್ರ ಸಂಖ್ಯೆ: ಡಿಪಿಎನ್/ಸಿಶಾ-1/264/2018-19, ದಿ: 16.11.2019.

2) ಸರ್ಕಾರದ ಆದೇಶ ಸಂಖ್ಯೆ: ಒಇ 218 ಪಿಪಿಇ 2018 (ಭಾ-2) ದಿನಾಂಕ: 08.11.2019.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ 124 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸಂಬಂಧ ದಿನಾಂಕ: 10.10.2019ರ ಕರ್ನಾಟಕ ರಾಜ್ಯ ಪತ್ರದಲ್ಲಿ ಈಗಾಗಲೇ ಪ್ರಕಟಣೆ ನೀಡಿದ್ದು, ಅಲ್ಲದೇ ಹೆಚ್ಚುವರಿಯಾಗಿ 81 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ದಿನಾಂಕ: 26.11.2019 ರಲ್ಲಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಒಟ್ಟು 205 ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 10.12.2019 ಎಂದು ನಿಗದಿಪಡಿಸಲಾಗಿರುತ್ತದೆ. ಓದಲಾದ (2)ರ ಆದೇಶದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಸದರಿ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು 06 ತಿಂಗಳಿಗಿಂತಲೂ ಹೆಚ್ಚು ಕಾಲಾವಕಾಶ ಬೇಕಾಗಿರುವುದರಿಂದ ನ್ಯಾಯಾಲಯಗಳ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ವೃತ್ತಿನಿರತ ಅರ್ಹ ವಕೀಲರಿಂದ ಖಾಲಿಯಿರುವ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳನ್ನು ಭರ್ತಿ ಮಾಡುವುದು ಅವಶ್ಯಕವಾಗಿರುವುದರಿಂದ ಜರೂರಾಗಿ ಒಟ್ಟು 205 ಹುದ್ದೆಗಳನ್ನು ತಾತ್ಕಾಲಿಕವಾಗಿ ವೃತ್ತಿನಿರತ ಅರ್ಹ ವಕೀಲರಿಂದ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಬಗ್ಗೆ ಕೋರಿ ಇಲಾಖಾ ಮುಖ್ಯಸ್ಥರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ.

ಈ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಒಇ 218 ಪಿಪಿಇ-2019(ಭಾಗ-2)**
**ಬೆಂಗಳೂರು, ದಿನಾಂಕ: 07ನೇ ಜನವರಿ 2020.**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ 205 ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರುಗಳ ಹುದ್ದೆಗಳನ್ನು ನೇರ ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆಯು ವಿಳಂಬವಾಗುವುದರಿಂದ, ದೈನಂದಿನ ಕೆಲಸ ಕಾರ್ಯ ನಿರ್ವಹಿಸಲು ಈ ಹುದ್ದೆಗಳನ್ನು ನೇರ ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಸರ್ಕಾರ ಮಂಜೂರಾತಿ ನೀಡಿದೆ.

5382
9/1/2020

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ನಿರ್ದೇಶಕರ ಕಛೇರಿ,
ಕೆ. ಎಚ್. ಬಿ. ಕಾಂಪ್ಲೆಕ್ಸ್, 6ನೇ ಮಹಡಿ,
ಕಾವೇರಿ ಭವನ, ಕೆಂಪೇಗೌಡ ರಸ್ತೆ,
ಬೆಂಗಳೂರು – 560 009.

ಸಂಖ್ಯೆ: ಡಿಪಿಪಿ/ಸಿಬ್ಬ-1/ 264 /2018-19
ಅಡಕ: 11 ಪುಟಗಳು

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ನಿರ್ದೇಶಕರ ಕಛೇರಿ, 6ನೇ ಮಹಡಿ,
ಕೆ.ಹೆಚ್.ಬಿ. ಕಾಂಪ್ಲೆಕ್ಸ್, ಕಾವೇರಿ ಭವನ,
ಬೆಂಗಳೂರು, ದಿನಾಂಕ: 07.01.2020

175/19-20

ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ
ಮತ್ತು ಸತ್ರ ನ್ಯಾಯಾಲಯಗಳ
ಸರ್ಕಾರಿ ಅಭಿಯೋಜಕರುಗಳಿಗೆ

ಮಾನ್ಯರೆ,

ವಿಷಯ: ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಒಇ 218 ಪಿಪಿಇ 2019(ಭಾಗ-2), ದಿನಾಂಕ: 07.01.2020.

*****

ಸರ್ಕಾರದ ಉಲ್ಲೇಖಿತ ಆದೇಶದಲ್ಲಿ ಈ ಇಲಾಖೆಯಲ್ಲಿ ಖಾಲಿ ಇರುವ 205 ಸಹಾಯಕ ಸರ್ಕಾರಿ ಅಭಿಯೋಜಕರು- ವ-ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳನ್ನು ತಾತ್ಕಾಲಿಕವಾಗಿ ವೃತ್ತಿ ನಿರತ ಅರ್ಹ ವಕೀಲರಿಂದ ಗುತ್ತಿಗೆ ಆಧಾರದ ಮೇಲೆ ನೇರ ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೆ ಭರ್ತಿ ಮಾಡಿಕೊಳ್ಳಲು ಸರ್ಕಾರವು ಮಂಜೂರಾತಿ ನೀಡಿರುತ್ತದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯನ್ನು ರಚಿಸಿ, ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳ ಸರ್ಕಾರಿ ಅಭಿಯೋಜಕರುಗಳನ್ನು ಸದಸ್ಯ ಕಾರ್ಯದರ್ಶಿ ಎಂದು ನೇಮಕ ಮಾಡಲಾಗಿರುತ್ತದೆ. ಆದ್ದರಿಂದ, ಈ ನಿಟ್ಟಿನಲ್ಲಿ ಜರೂರು ಕ್ರಮ ಕೈಗೊಳ್ಳುವಂತೆ ನಿಮಗೆ ಸೂಚಿಸಲಾಗಿದೆ. ಸರ್ಕಾರದ ಉಲ್ಲೇಖಿತ ಆದೇಶದ ಪ್ರತಿ ಹಾಗೂ ಜಿಲ್ಲಾವಾರು ಖಾಲಿ ಇರುವ ಹುದ್ದೆಗಳ ವಿವರಗಳ ಪಟ್ಟಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,

( ಹೆಚ್.ಕೆ. ಜಗದೀಶ್ )
ನಿರ್ದೇಶಕರು(ಪ್ರ).
ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ಇಲಾಖೆ, ಬೆಂಗಳೂರು
(ದೂರವಾಣಿ ಸಂಖ್ಯೆ:080-22213856)

7/1/2020

ಪ್ರತಿಯನ್ನು:
ರಾಜ್ಯದ ಎಲ್ಲಾ ಕಾನೂನು ಅಧಿಕಾರಿಗಳು(ಹಿರಿಯ), ಅವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಉಲ್ಲೇಖಿತ ಸರ್ಕಾರದ ಆದೇಶದ ಪ್ರತಿಯೊಂದಿಗೆ ಕಳುಹಿಸಲಾಗಿದೆ.

EST-1A/APP Contract Posts